ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಉಪ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 11/11/2019

# ನಗರದ 4 ಕ್ಷೇತ್ರಗಳಲ್ಲಿ ಬೈ ಎಲೆಕ್ಷನ್

## ನಾಮಪತ್ರ ಸಲ್ಲಿಕೆಗೆ ನ.18 ಕೊನೇ ದಿನ | ಡಿ.5ರಂದು ಮತದಾನ

ಬೆಂಗಳೂರು: ರಾಜ್ಯದ 15 ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆ ಘೋಷಣೆಯಾಗಿದೆ. ಬೆಂಗಳೂರು ಮಹಾನಗರ ವ್ಯಾಪ್ತಿಯ ನಾಲ್ಕು ಕ್ಷೇತ್ರಗಳಿಗೂ ಉಪ ಚುನಾವಣೆ ನಡೆಯಲಿದ್ದು, ಸೋಮವಾರದಿಂದ ನೀತಿಸಂಹಿತೆ ಜಾರಿಯಲ್ಲಿರುತ್ತದೆ.

ಬೆಂಗಳೂರು ನಗರ ವಿಭಾಗದ ಯಶವಂತಪುರ, ಬೆಂಗಳೂರು ಉತ್ತರ ವಲಯದ ಕೆ.ಆರ್. ಪುರ ಮತ್ತು ಮಹಾಲಕ್ಷ್ಮಿಲೇಔಟ್ ಹಾಗೂ ಬೆಂಗಳೂರು ಕೇಂದ್ರ ವಲಯದ ಶಿವಾಜಿನಗರದ ವ್ಯಾಪ್ತಿಯ ಅಭ್ಯರ್ಥಿಗಳು, ರಾಜಕೀಯ ಪಕ್ಷಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಮಾದರಿ ನೀತಿಸಂಹಿತೆ ಅನ್ವಯಿಸುತ್ತದೆ.

**ಇಂದಿನಿಂದ ನೀತಿಸಂಹಿತೆ ಜಾರಿ**

ಕೇಂದ್ರ ಚುನಾವಣಾ ಆಯೋಗದಿಂದ ಸೆ.27ರಂದು ಅಧಿಸೂಚನೆ ಹೊರಡಿಸಲಾಗಿದೆ. ನ.11ರಿಂದ ಮಾದರಿ ನೀತಿಸಂಹಿತೆ ಜಾರಿಯಲ್ಲಿದ್ದು, ನಾಮಪತ್ರ ಸಲ್ಲಿಕೆಗೆ ಅವಕಾಶ ನೀಡಲಾಗಿದೆ. ನ.18 ನಾಮಪತ್ರ ಸಲ್ಲಿಕೆಗೆ ಕೊನೇ ದಿನವಾಗಿದ್ದು, 19ರಂದು ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ನ.21 ಕೊನೆಯ ದಿನ. ಡಿ.5ರ ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮತದಾನ ನಡೆಯಲಿದ್ದು, ಡಿ. 12ರ ಬೆಳಗ್ಗೆ 8 ಗಂಟೆಯಿಂದ ಮತ ಎಣಿಕೆ ನಡೆಯಲಿದೆ. ಡಿ.11 ರವರೆಗೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ.

### ನಾಮಪತ್ರ ಸಲ್ಲಿಸುವ ಕೇಂದ್ರಗಳ ವಿವರ

ಕೆ.ಆರ್. ಪುರ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಗಳು ಕೆ.ಆರ್.ಪುರದ ಕಂದಾಯ ಅಧಿಕಾರಿಗಳ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಬಹುದು. ಯಶವಂತಪುರದಲ್ಲಿ ಕೆಂಗೇರಿ ಉಪನಗರದ ಕರ್ನಾಟಕ ಬ್ಯಾಂಕ್ ಕಟ್ಟಡದಲ್ಲಿ, ಮಹಾಲಕ್ಷ್ಮೀ ಲೇಔಟ್ ಅಭ್ಯರ್ಥಿಗಳು ರಾಜಾಜಿನಗರ ಕಂದಾಯ ಅಧಿಕಾರಿಗಳ ಕಚೇರಿ ಹಾಗೂ ಶಿವಾಜಿನಗರ ಅಭ್ಯರ್ಥಿಗಳು ಕ್ವೀನ್ಸ್ ರಸ್ತೆಯ ಕಂದಾಯ ಅಧಿಕಾರಿಗಳ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಬಹುದು.

### ನಿಷೇಧಾಜ್ಞೆ ಜಾರಿ

ನಗರದ 4 ಕ್ಷೇತ್ರಗಳ ಉಪಚುನಾವಣೆಗೆ ನಾಮಪತ್ರ ಸಲ್ಲಿಸುವ ಕಚೇರಿಗಳ 100 ಮೀಟರ್ ವ್ಯಾಪ್ತಿಯಲ್ಲಿ ಸೋಮವಾರದಿಂದ (ನ.11) ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ನ.13ರ ಸಂಜೆ 4 ಗಂಟೆಯವರೆಗೆ (ಕನಕ ಜಯಂತಿ- ನ.15 ಹಾಗೂ ಭಾನುವಾರ- ನ.17 ಹೊರತುಪಡಿಸಿ) ನಿಷೇಧಾಜ್ಞೆ ಜಾರಿಯಲ್ಲಿರಲಿದೆ ಎಂದು ನಗರ ಪೊಲೀಸ್ ಆಯುಕ್ತ ಭಾಸ್ಕರ್ ರಾವ್ ತಿಳಿಸಿದ್ದಾರೆ. ಸಮಾಜ ಘಾತುಕ ಶಕ್ತಿಗಳು ಪರಿಸ್ಥಿತಿಯನ್ನು ದುರುಪಯೋಗ ಪಡಿಸಿಕೊಂಡು ಸಾರ್ವಜನಿಕ ಮತ್ತು ಸರ್ಕಾರಿ ಆಸ್ತಿಗಳಿಗೆ ಹಾನಿಯುಂಟು ಮಾಡುವ ಸಂಚು ರೂಪಿಸಿರುವುದಾಗಿ ಗುಪ್ತವಾರ್ತೆ ವರದಿ ನೀಡಿದೆ. ಆದ್ದರಿಂದ ಐದಕ್ಕಿಂತ ಹೆಚ್ಚು ಜನ ಗುಂಪು ಸೇರುವುದನ್ನು, ಪ್ರತಿಭಟನೆ, ಮೆರವಣಿಗೆ, ಸಭೆಗಳನ್ನು ನಡೆಸುವುದನ್ನು ನಿಷೇಧಿಸಲಾಗಿದೆ. ವ್ಯಕ್ತಿಗಳ ಅಥವಾ ಶವ ಪ್ರತಿಕೃತಿಗಳ ಪ್ರದರ್ಶನ, ಪ್ರಚೋದಿಸುವಂತಹ ಘೋಷಣೆಗಳನ್ನು ಕೂಗುವುದಕ್ಕೂ ಕಡಿವಾಣ ಹಾಕಲಾಗಿದೆ.